ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
[KARN]ATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ವಿಷಯ : DEPARTMENT / SUBJECT: ಶಿಕ್ಷಕರು

ಪತ್ರಿಕೆ : NAME OF THE NEWS PAPER: ವಿಜಯವಾಣಿ    ದಿನಾಂಕ : DATE 10-1-2020

ವಿಜಯವಾಣಿ

# ಪಾಲಕರ ಇಂಗ್ಲಿಷ್ ವ್ಯಾಮೋಹದಿಂದ ಭಾಷೆ ಮೇಲೆ ಪರಿಣಾಮ

## ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅಭಿಮತ | ರಾಜ್ಯಮಟ್ಟದ ಶೈಕ್ಷಣಿಕ ಕಾರ್ಯಾಗಾರ, ಶಾಲಾ ಪಂಚಾಂಗ ಬಿಡುಗಡೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಪಾಲಕರಲ್ಲಿ ಹೆಚ್ಚುತ್ತಿರುವ ಇಂಗ್ಲಿಷ್ ಮಾಧ್ಯಮದ ಮೇಲಿನ ವ್ಯಾಮೋಹ ಕನ್ನಡ ಭಾಷೆ ಮತ್ತು ಸರ್ಕಾರಿ ಶಾಲೆಗಳ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಕಳವಳ ವ್ಯಕ್ತಪಡಿಸಿದ್ದಾರೆ.

ಶಿಕ್ಷಕರ ಸದನದಲ್ಲಿ ಕರ್ನಾಟಕದ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಗುರುವಾರ ಆಯೋಜಿಸಿದ್ದ ರಾಜ್ಯಮಟ್ಟದ ಶೈಕ್ಷಣಿಕ ಕಾರ್ಯಾಗಾರ ಹಾಗೂ ಶಾಲಾ ಪಂಚಾಂಗ ಬಿಡುಗಡೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಸರ್ಕಾರಿ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಕಲಿತವರು ಮಾಡಿರುವ ಸಾಧನೆಗಳನ್ನು ಪಾಲಕರಿಗೆ ಪರಿಚಯಿಸುವ ಅಗತ್ಯವಿದೆ. ಹಾಗೆಯೇ, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.



ಶಿಕ್ಷಕರ ಸದನದಲ್ಲಿ ಆಯೋಜಿಸಿದ್ದ ಶೈಕ್ಷಣಿಕ ಕಾರ್ಯಾಗಾರದಲ್ಲಿ ಶಾಲಾ ಪಂಚಾಂಗ ಬಿಡುಗಡೆ ಮಾಡಲಾಯಿತು. ವಿಶ್ವೇಶ್ವರ ಹೆಗಡೆ ಕಾಗೇರಿ, ಪುಟ್ಟಣ್ಣ, ಅ. ದೇವೇಗೌಡ ಮತ್ತಿತರರು ಉಪಸ್ಥಿತರಿದ್ದರು.

ಶೈಕ್ಷಣಿಕ ವರ್ಷದ ಆರಂಭಕ್ಕೂ ಮುನ್ನವೇ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಬೇಕು. ಒಂದು ವೇಳೆ ಕಾಯಂ ಶಿಕ್ಷಕರ ನೇಮಕ ಸಾಧ್ಯವಾಗದಿದ್ದಲ್ಲಿ, ಅತಿಥಿ ಶಿಕ್ಷಕರನ್ನು ತೆಗೆದುಕೊಂಡಾದರೂ ಮಕ್ಕಳ ಪಠ್ಯ ಚಟುವಟಿಕೆಗಳಿಗೆ ಅಡ್ಡಿ ಉಂಟಾಗದಂತೆ ನೋಡಿಕೊಳ್ಳಬೇಕು. ಉತ್ತಮ ಫಲಿತಾಂಶದ ಕಡೆಗೆ ಗಮನ ಹರಿಸಬೇಕು. ಆಗ ಸರ್ಕಾರಿ ಶಾಲೆಗಳು ವಿದ್ಯಾರ್ಥಿಗಳಿಂದ ತುಂಬಲಿವೆ ಎಂದು ಸಲಹೆ ನೀಡಿದರು. ಶಾಲೆಗಳು ಕೇವಲ ಪಠ್ಯಕ್ಕೆ ಸೀಮಿತವಾಗಬಾರದು. ಮಕ್ಕಳಿಗೆ ಬದುಕಿನ ಪಾಠವನ್ನೂ ಶಿಕ್ಷಕರು ಕಲಿಸಬೇಕು. ಈ ನಿಟ್ಟಿನಲ್ಲಿ ಆದರ್ಶ, ದೇಶಭಕ್ತಿಯಂತಹ ಹಾಗೂ ಮಕ್ಕಳ ಜ್ಞಾನ ವಿಕಾಸಕ್ಕೆ ಪೂರಕವಾದ ವಿಚಾರಗಳನ್ನು ತಿಳಿಸಿಕೊಡಬೇಕು ಎಂದು ಹೇಳಿದರು.

> ಸರ್ಕಾರ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಿದ್ದು, ಉತ್ತಮವಾಗಿ ಸ್ಪಂದಿಸಲಿದೆ. ಶಿಕ್ಷಕರ ಬೇಡಿಕೆಗಳನ್ನು ಶಿಕ್ಷಣ ಸಚಿವರು ಹಾಗೂ ಮುಖ್ಯಮಂತ್ರಿಗಳಿಗೆ ತಿಳಿಸುವ ಪ್ರಾಮಾಣಿಕ ಪ್ರಯತ್ನ ಮಾಡುವೆ.
>
> | ವಿಶ್ವೇಶ್ವರ ಹೆಗಡೆ ಕಾಗೇರಿ ವಿಧಾನಸಭಾಧ್ಯಕ್ಷ

ವಿಧಾನಪರಿಷತ್ ಸದಸ್ಯರಾದ ಅ. ದೇವೇಗೌಡ, ವೈ.ಎ. ನಾರಾಯಣಸ್ವಾಮಿ, ಪುಟ್ಟಣ್ಣ, ಶಿಕ್ಷಣ ತಜ್ಞ ಡಾ. ವಿ.ಪಿ. ನಿರಂಜನಾರಾಧ್ಯ, ಸಂಘದ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್ ನುಗ್ಗಿ, ಉಪಾಧ್ಯಕ್ಷ ಬಸವರಾಜ ಗುರಿಕಾರ ಇದ್ದರು.

### ಶಿಕ್ಷಕರ ಸಂಘದ ಬೇಡಿಕೆಗಳು

ಪ್ರಸಕ್ತ ಸಾಲಿಗೆ 7ನೇ ತರಗತಿ ಪಬ್ಲಿಕ್ ಪರೀಕ್ಷೆ ಕೈಬಿಡಬೇಕು. ನೂತನ ಪಿಂಚಣಿ ಯೋಜನೆ ರದ್ದುಪಡಿಸಿ ಹಳೆಯ ಪಿಂಚಣಿ ವ್ಯವಸ್ಥೆಯನ್ನೇ ಮುಂದುವರಿಸಬೇಕು. ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಪದವೀಧರರನ್ನು ಪದವೀಧರ ಶಿಕ್ಷಕರೆಂದು ಪರಿಗಣಿಸಿ (ವೃಂದ ಮತ್ತು ನೇಮಕಾತಿ ನಿಯಮ ಬದಲಾಯಿಸಿ) ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ವೇತನ ಶ್ರೇಣಿ ನಿಗದಿಗೊಳಿಸಬೇಕು. ಎಲ್ಲ ಪ್ರಾಥಮಿಕ ಶಾಲೆಗಳಲ್ಲಿ ಎಲ್‌ಕೆಜಿ ಮತ್ತು ಯುಕೆಜಿ ಪ್ರಾರಂಭಿಸಬೇಕು. ಗ್ರಾಮೀಣ ಕೃಪಾಂಕ ಶಿಕ್ಷಕರ ವಜಾ ಆದ ಸೇವೆಯನ್ನು 'ಸತತ ಸೇವೆ' ಎಂದು ಪರಿಗಣಿಸಿ ಆರ್ಥಿಕ ಹಾಗೂ ಇನ್ನಿತರ ಸೌಲಭ್ಯಗಳನ್ನು ಒದಗಿಸುವುದು ಸೇರಿ ಹಲವು ಬೇಡಿಕೆಗಳ ಈಡೇರಿಕೆ ಕುರಿತು ಸಂಘದ ಅಧ್ಯಕ್ಷ ವಿ.ಎಂ. ನಾರಾಯಣಸ್ವಾಮಿ ಸರ್ಕಾರಕ್ಕೆ ಮನವಿ ಮಾಡಿದರು.